(22)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪುಟ್ಟಣ್ಣ ಇವರು ನಿಯಮ 72ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಮಾನ್ಯ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಹೇಳಿಕೆ**

**ವಿಷಯ**

ಅನುದಾನಿತ ಕೈಗಾರಿಕಾ ತರಬೇತಿ ಕೇಂದ್ರಗಳ ನೌಕರರಿಗೆ ಶ್ರೀ ಥಾಮಸ್ ನೇತೃತ್ವದ ವರದಿಯಲ್ಲಿನ ಶಿಫಾರಸ್ಸನ್ನು ಸಚಿವ ಸಂಪುಟದಲ್ಲಿ ಒಪ್ಪಿಕೊಂಡು ಇತರೆ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ನೀಡಿರುವಂತೆ ಶೇಕಡಾ 100ರಷ್ಟು ವೇತನಾನುದಾನ, ಪಿಂಚಣಿ ಮತ್ತು ನಿವೃತ್ತಿ ಸೌಲಭ್ಯಗಳು, ಸೇವಾ ಸೌಲಭ್ಯಗಳು ಹಾಗೂ ಸೇವಾ ನಿಯಮಗಳನ್ನು (ಅನುದಾನ ಸಂಹಿತೆ) ನೀಡಲು ಡಿಸೆಂಬರ್ 2014ರಲ್ಲಿ ಜಾರಿಗೊಳಿಸಲು ಆದೇಶಿಸಲಾಗಿದೆ. ಸೇವಾ ನಿಯಮಗಳನ್ನು ರೂಪಿಸುತ್ತಿರುವುದಾಗಿ ಹಲವಾರು ಬಾರಿ ಸದನದಲ್ಲಿ ಚರ್ಚೆಯಾಗಿ ಉತ್ತರ ನೀಡಿದ್ದರು ಸಹ ಕೌಶಲ್ಯಾಭಿವೃದ್ಧಿ ಇಲಾಖೆಯಲ್ಲಿ ಆದೇಶ ಮಾಡಿರುವುದಿಲ್ಲ. ಇದಕ್ಕಾಗಿ ಆಯುಕ್ತರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದ್ದು ಸದರಿ ಸಮಿತಿಯವರು ಎಲ್ಲಾ ಸೌಲಭ್ಯಗಳನ್ನು ನೀಡುವಂತೆ ಶಿಫಾರಸ್ಸು ಮಾಡಿರುತ್ತಾರೆ. ಆದರೆ ಈ ಹಿಂದೆಯೇ ಆರ್ಥಿಕ ಇಲಾಖೆಯಿಂದ ಅನುಮೋದನೆಯಾಗಿದ್ದರು ಸಹ ಮತ್ತೆ ಆರ್ಥಿಕ ಇಲಾಖೆಗೆ ಕಳುಹಿಸಿ ವಿಳಂಬ ಮಾಡಲಾಗುತ್ತಿದೆ. ಕೂಡಲೇ ಆರ್ಥಿಕ ಇಲಾಖೆಯಿಂದ ಕಡತವನ್ನು ತರಿಸಿಕೊಂಡು ಅನುದಾನಿತ ಕೈಗಾರಿಕಾ ತರಬೇತಿ ಕೇಂದ್ರಗಳ ನೌಕರರಿಗೆ ಇತರೆ ಅನುದಾನಿತ ನೌಕರರುಗಳ ನೀಡಿರುವಂತೆ ಎಲ್ಲಾ ಸೌಲಭ್ಯಗಳನ್ನು ಮಂಜೂರು ಮಾಡಿ ಆದೇಶ ಹೊರಡಿಸಬೇಕೆಂಬ ವಿಷಯವನ್ನು ನಿಯಮ 72ರಲ್ಲಿ ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುತ್ತೇನೆ.

**ಹೇಳಿಕೆ**

ಸರ್ಕಾರದ ಆದೇಶ ಸಂಖ್ಯೆ: ಕಾಇ 45 ಇಟಿಐ 91 ದಿನಾಂಕ: 15.11.1997ರಲ್ಲಿ ರಾಜ್ಯದಲ್ಲಿರುವ ಅರ್ಹ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ದಿನಾಂಕ: 01.11.1997ರಿಂದ ಅನ್ವಯವಾಗುವಂತೆ "GRANT-IN-AID-CODE FOR PRIVATE INDUSTRIAL TRAINING INSTITUTES IN KARNATAKA 1997" ಅನ್ನು ಜಾರಿಗೊಳಿಸಲಾಗಿದೆ.

2007-08ನೇ ಸಾಲಿನ ಆಯವ್ಯಯ ಘೋಷಣೆಯ ಅನುಸಾರ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ Student Centric Grant-in-Aid Scheme ಅನ್ನು ಜಾರಿಗೊಳಿಸುವ ವಿಧಾನವನ್ನು ಒಳಗೊಂಡಂತೆ ಶ್ರೀ ಪಿ.ಎಸ್.ಎಸ್.ಥಾಮಸ್, ನಿವೃತ್ತ ಭಾ.ಆ.ಸೇ ಇವರ ನೇತೃತ್ವದ ಸಮಿತಿಯನ್ನು ರಚಿಸಲಾಗಿತ್ತು. ಸದರಿ ಸಮಿತಿಯು ಸಲ್ಲಿಸಿರುವ ವರದಿಯಲ್ಲಿನ ಶಿಫಾರಸ್ಸುಗಳನ್ವಯ ಸರ್ಕಾರದ ಆದೇಶ ಸಂಖ್ಯೆ: ಕಾಇ 303 ಇಟಿಐ 2014 ದಿನಾಂಕ: 29.12.2014 ಹಾಗೂ ದಿನಾಂಕ: 14.11.2016ರಲ್ಲಿ ರಾಜ್ಯದಲ್ಲಿನ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳಿಗೆ ಇರುವಂತೆ ಪಿಂಚಣಿ, ಗ್ರಾಚ್ಯುಯಿಟಿ, ಸೇವಾ ಸೌಲಭ್ಯಗಳು ಹಾಗೂ ಸೇವಾ ನಿಯಮಗಳನ್ನು ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ಸಿಬ್ಬಂದಿಗಳಿಗೆ ಭವಿಷ್ಯವರ್ತಿಯಾಗಿ ನೀಡಲು ಆದೇಶಿಸಲಾಗಿತ್ತು.

ಮುಂದುವರೆದು, 1997 ರ ಅನುದಾನ ಸಂಹಿತೆಯನ್ನು ಪರಿಷ್ಕರಿಸಿ ಸರ್ಕಾರದ ಅಧಿಸೂಚನೆ ಸಂಖ್ಯೆ: SDEL 113 ITA 2024 (P3) ದಿನಾಂಕ: 01.12.2025ರಲ್ಲಿ Karnataka Technical Education Institutions (Grant-in-Aid Code for Private Aided Industrial Training Institutes) Rules 2025ನ್ನು ಹೊರಡಿಸಲಾಗಿರುತ್ತದೆ. ಸದರಿ ಅಧಿಸೂಚನೆಯನ್ವಯ ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ಅರ್ಹ ನೌಕರರಿಗೆ ಲಭ್ಯವಾಗುವ ಎಲ್ಲಾ ಸೌಲಭ್ಯಗಳನ್ನು ನಿಯಮಾನುಸಾರ ಮಂಜೂರು ಮಾಡಲು ಕ್ರಮವಹಿಸಲಾಗುವುದು.

**ಕೌಉಜೀಇ 96 ಕೈತಪ್ರ 2025**

(ಡಾ. ಶರಣಪ್ರಕಾಶ ಆರ್ ಪಾಟೀಲ)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.